# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 796 |
| ಸದಸ್ಯರ ಹೆಸರು | : | ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್)<br>(ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 10.03.2026 |
| ಉತ್ತರಿಸುವ ಸಚಿವರು | : | ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಉದ್ಯಮ ಸ್ಥಾಪಿಸಲು ಸರ್ಕಾರವು ನೀಡುತ್ತಿರುವ ಸೌಲಭ್ಯಗಳು ಹಾಗೂ ಉತ್ತೇಜನಗಳು ಯಾವುವು; | ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಬೆಳವಣಿಗೆಗೆ ಕೈಗಾರಿಕಾ ನೀತಿ ಮತ್ತು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಅದರ ವಿವರಗಳನ್ನು **ಅನುಬಂಧ** ದಲ್ಲಿ ನೀಡಲಾಗಿದೆ. |
| ಆ) | ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ರಾಜ್ಯದಲ್ಲಿ ಅತ್ಯಂತ ಹಿಂದುಳಿದ ಪ್ರವರ್ಗ-1ರ ಜಾತಿಗಳಿಗೆ ಮೀಸಲಾತಿಯನ್ನು ನೀಡಲಾಗಿದೆಯೇ; | ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ವತಿಯಿಂದ ಸರ್ಕಾರದ ಹೊಸ ಕೈಗಾರಿಕಾ ನೀತಿ 2020-25 ರಂತೆ ನಿಗಮವು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತುಗಳಲ್ಲಿ ಅಲ್ಪಸಂಖ್ಯಾತ, ಹಿಂದುಳಿದ ವರ್ಗ (ಪ್ರವರ್ಗ-1 ಮತ್ತು ವರ್ಗ-2ಎ) ವಿಕಲಚೇತನ ಉದ್ದಿಮೆದಾರರಿಗೆ ಕನಿಷ್ಟ ಶೇಕಡ 10 ರಷ್ಟು ನಿವೇಶನ / ಮಳಿಗೆಗಳನ್ನು ಮೀಸಲಿಡಲಾಗುತ್ತಿದೆ.<br><br>ನಿಗಮದ ವತಿಯಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಇದುವರೆಗೆ ಅಭಿವೃದ್ಧಿಪಡಿಸಿರುವ ಒಟ್ಟು 193 ಕೈಗಾರಿಕಾ ವಸಾಹತುಗಳಲ್ಲಿ ಒಟ್ಟು 10488 ಕೈಗಾರಿಕಾ ನಿವೇಶನಗಳನ್ನು ಅಭಿವೃದ್ಧಿಪಡಿಸಿದ್ದು, ಈ ಪೈಕಿ ಹಂಚಿಕೆ ಮಾಡಲಾಗಿರುವ ಒಟ್ಟು 9135 ನಿವೇಶನಗಳಲ್ಲಿ ಪ್ರವರ್ಗ-1 ಉದ್ದಿಮೆದಾರರು ಸಹ ಒಳಗೊಂಡಿರುತ್ತಾರೆ. |
| ಇ) | ಮೀಸಲಾತಿಯನ್ನು ನೀಡಿದಲ್ಲಿ ಶೇಕಡವಾರು ನೀಡಿರುವ ಸಂಖ್ಯೆ ಎಷ್ಟು; ಇದುವರೆಗೂ ಎಷ್ಟು ಪ್ರವರ್ಗ-1ರ ಜಾತಿಯ ಉದ್ದಿಮೆದಾರರಿಗೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅನುವು ಮಾಡಿಕೊಡಲಾಗಿದೆ. | |
| ಈ) | ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಬ್ಯಾಂಕುಗಳಿಂದ ಸಾಲ ಪಡೆಯಲು ಸರ್ಕಾರದ ಗ್ಯಾರಂಟಿ ನೀಡಲಾಗುತ್ತದೆಯೇ ಅಥವಾ ಇಲ್ಲವೇ ಮಾಹಿತಿ ನೀಡುವುದು? | ಕರ್ನಾಟಕ ರಾಜ್ಯ ಹಣಕಾಸು ನಿಗಮದಿಂದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ರೂ.2 ಕೋಟಿವರೆಗೆ ಸಾಲ ಪಡೆಯಲು ಕರ್ನಾಟಕ ಸಮಾನಾಂತರ ಖಾತರಿ ಯೋಜನೆ (Collateral Security) ಯನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಜಾರಿಗೊಳಿಸಲಾಗುತ್ತಿದೆ. |

ಸಿಐ 77 ಸಿಎಸ್‌ಸಿ 2026

(ಶರಣಬಸಪ್ಪ ದರ್ಶನಾಪೂರ)
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು.

# ಅನುಬಂಧ

## ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ ಟಿ ಶ್ರೀನಿವಾಸ್ (ಡಿ ಟಿ ಎಸ್) (ಶಿಕ್ಷಕರ ಕ್ಷೇತ್ರ) ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 796ಕ್ಕೆ ಅನುಬಂಧ.

**1. ಕೈಗಾರಿಕಾ ನೀತಿ 2025-30**

1. ಬಂಡವಾಳ ಹೂಡಿಕೆ ಸಹಾಯಧನ/ ವಹಿವಾಟು ಆಧಾರಿತ ಹೂಡಿಕೆ ಸಹಾಯಧನ.
2. ಮುದ್ರಾಂಕ ಶುಲ್ಕ ವಿನಾಯಿತಿ ಹಾಗೂ ನೋಂದಣಿ ಶುಲ್ಕ ರಿಯಾಯಿತಿ.
3. ಭೂ ಪರಿವರ್ತನಾ ಶುಲ್ಕ ಮರುಪಾವತಿ.
4. ವಿದ್ಯುತ್ ಶುಲ್ಕದ ಮೇಲಿನ ತೆರಿಗೆ ವಿನಾಯಿತಿ.
5. ವಿದ್ಯುತ್ ಚ್ಛಕ್ತಿ ಸಹಾಯಧನ.
6. ತಂತ್ರಜ್ಞಾನ ಅಳವಡಿಕೆ & ನವೋನ್ವೇಶಣೆ ಉತ್ತೇಜನ
7. ರಫ್ತು ಘಟಕಗಳಿಗೆ ಪ್ರೋತ್ಸಾಹ.
8. ಸುಸ್ಥಿರತೆ ಮತ್ತು ಜವಾಬ್ದಾರಿಯುತ ಕೈಗಾರೀಕರಣ ಉತ್ತೇಜನ
9. ಲಾಜಿಸ್ಟಿಕ್ಸ್ ಮತ್ತು ಉಗ್ರಾಣ ಸಹಾಯಧನ

**2. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವರ್ಗದವರಿಗೆ ಯೋಜನೆಗಳು**

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವರ್ಗದವರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗಳ ಯೋಜನೆಯ ವಿವಿಧ ಕಾರ್ಯಕ್ರಮಗಳ ವಿವರ ಕೆಳಕಂಡಂತಿದೆ. ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗಳಡಿ ನೀಡುತ್ತಿರುವ ಸಾಲ ಸೌಲಭ್ಯದ ವಿವರ ಕೆಳಕಂಡಂತಿದೆ.

**ಅ. ಅತೀ ಸಣ್ಣ/ಸಣ್ಣ ಕೈಗಾರಿಕಾ ಘಟಕಗಳಿಗೆ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ:**

ಈ ಯೋಜನೆಯಡಿ ಪ.ಜಾ/ಪ.ಪಂ. ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಹೊಸ ಘಟಕ ಸ್ಥಾಪಿಸುವ ಮೊದಲ ಪೀಳಿಗೆ ಉದ್ದಿಮೆದಾರಿಗೆ ಯೋಜನಾ ವೆಚ್ಚದಲ್ಲಿ Debt Equity ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿ ರಹಿತ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುವುದು. ವಿಸ್ತರಣೆ/ಆಧುನೀಕರಣ/ಚಟುವಟಿಕೆ ಬದಲಾವಣೆ ಹೊಂದಿದ ಉದ್ಯಮಗಳು ಅರ್ಹವಿರುತ್ತದೆ.

ಯಂತ್ರೋಪಕರಣಗಳ ಮೇಲೆ ರೂ.10.00 ಕೋಟಿ ಹೂಡಿಕೆ ಮಾಡಿರುವ ಘಟಕಗಳು ಗರಿಷ್ಟ ರೂ.75.00 ಲಕ್ಷಗಳ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ಪಡೆಯಬಹುದಾಗಿದೆ. ಮಂಜೂರಾತಿ ಸಮಿತಿ ಸಭೆಯಲ್ಲಿ ವಿವರವಾದ ಪರಿಶೀಲನೆಯ ನಂತರ ಪರಿಶೀಲನಾ ಸಮಿತಿ ಶಿಫಾರಸು ಮಾಡಿದ ಘಟಕಗಳಿಗೆ ಸಾಫ್ಟ್ ಸೀಡ್ ಕ್ಯಾಪಿಟಲ್ ಸಹಾಯವನ್ನು ಮಂಜೂರು ಮಾಡಲಾಗುವುದು.

ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ಬಿಡುಗಡೆಮಾಡಿದ ದಿನಾಂಕದಿಂದ 04 ವರ್ಷ Moratorium ಅವಧಿಯಾಗಿರುತ್ತದೆ. ನಂತರ 5 ವರ್ಷಗಳಲ್ಲಿ 20 ತ್ರೈಮಾಸಿಕ ಸಮಕಂತುಗಳಲ್ಲಿ ಈ ಸಾಲವನ್ನು ಮರುಪಾವತಿ ಮಾಡತಕ್ಕದ್ದು.

**ಆ. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ/ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತರವರಿಂದ ಹಂಚಿಕೆಯಾಗುವ ನಿವೇಶನ/ಪ್ಲಾಟ್/ಶೆಡ್‌ಗಳಿಗೆ ರಿಯಾಯಿತಿ**

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಉದ್ದಿಮೆದಾರರಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ/ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮಗಳಿಂದ ಹಂಚಿಕೆಯಾಗುವ ಗರಿಷ್ಟ 2 ಎಕರೆ ಕೈಗಾರಿಕಾ ನಿವೇಶನ/ಪ್ಲಾಟ್ ಗಳಿಗೆ ಶೇ.75 ರಷ್ಟು ಸಹಾಯಧನ ನೀಡಲಾಗುತ್ತಿದೆ.
ಹಂಚಿಕೆ ಪತ್ರದಲ್ಲಿನ ಮೊತ್ತದ ಶೇ.10 ರಷ್ಟು ಮೊತ್ತವನ್ನು ಪಾವತಿಸಿ ಫಲಾನುಭವಿಯು ಸ್ವಾಧೀನ ಪತ್ರ ಪಡೆಯತಕ್ಕದ್ದು, ಉಳಿದ ಶೇ.15 ರಷ್ಟು ಮೊತ್ತವನ್ನು ಸ್ವಾಧೀನ ಪತ್ರ ವಿತರಿಸಿದ ದಿನಾಂಕದಿಂದ 8 ತ್ರೈಮಾಸಿಕ ಸಮಕಂತುಗಳಲ್ಲಿ ನಿಗಮ ಹಾಗೂ ಮಂಡಳಿಗೆ ಫಲಾನುಭವಿಯು ಪಾವತಿಸತಕ್ಕದ್ದು.

**ಇ. ಗುಡಿ ಮತ್ತು ಸೂಕ್ಷ್ಮ ಕೈಗಾರಿಕಾ ಘಟಕಗಳು/ಕುಶಲಕರ್ಮಿಗಳಿಗೆ ಬ್ಯಾಂಕಿನ ಸಾಲದ ಮೇಲೆ ಶೇ.60 ಸಹಾಯಧನ ಕಾರ್ಯಕ್ರಮ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಫಲಾನುಭವಿಗಳು ಗುಡಿ ಮತ್ತು ಅತೀ ಸೂಕ್ಷ್ಮ ಕೈಗಾರಿಕಾ ಘಟಕಗಳ ಸ್ಥಾಪನೆಗೆ ಹಣಕಾಸು ಸಂಸ್ಥೆಗಳಿಗೆ ಸಾಲ ಮಂಜೂರಾತಿ ಪಡೆದ ನಂತರ ಇಲಾಖೆಯಿಂದ ಈ ಯೋಜನೆಯಡಿ ಅರ್ಹ ಸಹಾಯಧನ ಮಂಜೂರು ಮಾಡಿ, ಸಾಲದ ಮೊದಲನೇ ಕಂತು ಬಿಡುಗಡೆಯಾದ ಮೇಲೆ ಸದರಿ ಸಹಾಯಧನ ಮೊತ್ತವನ್ನು ಸಂಬಂಧಪಟ್ಟ ಬ್ಯಾಂಕ್/ಹಣಕಾಸು ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗುತ್ತಿದೆ.

- ಪ್ರವರ್ತಕರ ಬಂಡವಾಳ ಯೋಜನಾ ವೆಚ್ಚದ ಶೇ.10
- ಯೋಜನಾ ವೆಚ್ಚದ ಶೇ.90 ರಷ್ಟನ್ನು ಹಣಕಾಸು ಸಂಸ್ಥೆ / ವಾಣಿಜ್ಯ ಬ್ಯಾಂಕ್‌ಗಳು, ಸಹಕಾರ ಬ್ಯಾಂಕ್‌ಗಳು, ರೀಜನಲ್ ರೂರಲ್ ಬ್ಯಾಂಕ್ (ಪತ್ತಿನ ಸಹಕಾರ ಸಂಘಗಳನ್ನು ಹೊರತುಪಡಿಸಿ) ಗಳಿಂದ ಸಾಲ

ಹಣಕಾಸು ಸಂಸ್ಥೆ/ವಾಣಿಜ್ಯ ಬ್ಯಾಂಕ್‌ಗಳು, ಸಹಕಾರ ಬ್ಯಾಂಕ್‌ಗಳು, ರೀಜನಲ್ ರೂರಲ್ ಬ್ಯಾಂಕ್‌ಗಳಿಂದ (ಪತ್ತಿನ ಸಹಕಾರ ಸಂಘಗಳನ್ನು ಹೊರತುಪಡಿಸಿ) ಮಂಜೂರಾದ ಸಾಲದ ಮೇಲೆ, ಇಲಾಖೆ ವತಿಯಿಂದ ರೂ.10.00ಲಕ್ಷ ಮೀರದಂತೆ ಇರುವ ಯೋಜನೆಗಳಿಗೆ ಯೋಜನಾ ವೆಚ್ಚದ ಮೇಲೆ ಶೇ.60 ರಷ್ಟು ಗರಿಷ್ಟ ರೂ.5.00 ಲಕ್ಷಗಳವರೆಗೂ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

**ಈ. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರು ಕೆಎಸ್.ಎಫ್ ಸಿ ಮತ್ತು ಇತರೇ ಹಣಕಾಸು ಸಂಸ್ಥೆಯವರು ವಿಧಿಸಿರುವ ಪರಿಷ್ಕರಣಾ ಶುಲ್ಕ, ಕಾನೂನು ಶುಲ್ಕ, ಏಕಕಾಲಿಕ ಸಾಲ ವಿತರಣಾ ಶುಲ್ಕ ಮತ್ತು ಇತರೆ ಶುಲ್ಕಗಳ ಮರುಪಾವತಿ**

ದಿನಾಂಕ:01/04/2017 ರಿಂದ ಮೊದಲ ಬಾರಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರು ಸ್ಥಾಪಿಸುವ ಸಣ್ಣ ಮತ್ತು ಅತೀ ಸಣ್ಣ ಘಟಕಗಳು ಸಾಲ ಪಡೆಯುವ ಸಂದರ್ಭದಲ್ಲಿ ಕೆಎಸ್.ಎಫ್ ಸಿ ಮತ್ತು ಇತರೇ ಹಣಕಾಸು ಸಂಸ್ಥೆಯವರು ವಿಧಿಸಿರುವ ಪರಿಷ್ಕರಣಾ ಶುಲ್ಕ, ಕಾನೂನು ಶುಲ್ಕ, ಏಕಕಾಲಿಕ ಸಾಲ ವಿತರಣಾ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ಸರ್ಕಾರದ ವತಿಯಿಂದ ಮರುಪಾವತಿಸಲಾಗುತ್ತಿದೆ.

**ಉ. ವಿದ್ಯುಚ್ಛಕ್ತಿ ಸಹಾಯಧನ:**

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ಯಮಗಳು ದಿನಾಂಕ:01/04/2017 ರಿಂದ ಪ್ರಾರಂಭವಾಗಿರುವ ಹೊಸ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕಾ ಘಟಕಗಳಿಗೆ ಮೊದಲ 5 ವರ್ಷಗಳ ಅವಧಿಗೆ ಪ್ರತಿ ಯುನಿಟ್‌ಗೆ ರೂ.2ರಂತೆ
ವಿದ್ಯುಚ್ಛಕ್ತಿ ಸಹಾಯಧನ ನೀಡಲಾಗುತ್ತಿದೆ.

**3. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಹೊಸ ಹೂಡಿಕೆಗಾಗಿ ಸಾಲ ಪಡೆದು ಸ್ಥಾಪನೆಗೊಳ್ಳುವ ಸೂಕ್ಷ್ಮ ಮತ್ತು ಸಣ್ಣ ಉತ್ಪಾದನಾ ಕೈಗಾರಿಕೆಗಳಿಗೆ ಶೇ 6% ಬಡ್ಡಿ ಸಹಾಯಧನ ಯೋಜನೆ – (ಸಾಮಾನ್ಯ )**

**ಯೋಜನೆಯ ಅನ್ವಯ :**

- ಈ ಯೋಜನೆಯು ಕೆ.ಎಸ್.ಎಫ್.ಸಿ ಯಿಂದ ವಿಸ್ತರಣೆ / ಆಧುನೀಕರಣ / ವೈರುಧ್ವೀಕರಣ / ತಾಂತ್ರಿಕ ಉನ್ನತೀಕರಣ ಮೂಲಕ ಕಟ್ಟಣ ಮತ್ತು ಯಂತ್ರೋಪಕರಣಗಳಲ್ಲಿ ಹೂಡಿಕೆಗಾಗಿ ಸಾಲ ಪಡೆಯುವ ಸೂಕ್ಷ್ಮ ಮತ್ತು ಸಣ್ಣ ಉತ್ಪಾದನಾ ಕೈಗಾರಿಕಾ ಘಟಕಗಳಿಗೆ ಮಾತ್ರ ಅನ್ವಯಿಸುತ್ತದೆ.
- ಕರ್ನಾಟಕ ಸರ್ಕಾರ/ ಭಾರತ ಸರ್ಕಾರದ ಯಾವುದೇ ಯೋಜನೆಯಡಿ ಬಡ್ಡಿ ಸಹಾಯಧನ ಪಡೆದ ಘಟಕಗಳು ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹವಿರುವುದಿಲ್ಲ.
- ಈ ಯೋಜನೆಯು ದುಡಿಮೆ ಬಂಡವಾಳ ಸಾಲಕ್ಕೆ ಅನ್ವಯಿಸುವುದಿಲ್ಲ.

**ಸಾಲದ ಮೊತ್ತ :**

- ಸೂಕ್ಷ್ಮ ಮತ್ತು ಸಣ್ಣ ಉತ್ಪಾದನಾ ಘಟಕಗಳಿಗೆ : ರೂ.500.00 ಲಕ್ಷ ಅವಧಿ ಸಾಲ (ಕಟ್ಟಡ ಮತ್ತು ಉತ್ಪಾದನೆಗೆ ನೇರವಾಗಿ ಉಪಯೋಗಿಸುವ ಯಂತ್ರೋಪಕರಣ ಮೇಲೆ)
- ಸೂಕ್ಷ್ಮ ಮತ್ತು ಸಣ್ಣ ಉತ್ಪಾದನಾ ಕೈಗಾರಿಕೆಗಳಿಗೆ ಸಾಲದ ಮೊತ್ತವು ರೂ.500.00 ಲಕ್ಷ ಮೀರಿದಲ್ಲಿ, ಬಡ್ಡಿ ಸಹಾಯಧನಕ್ಕೆ ಸಾಲದ ಮೊತ್ತವನ್ನು ರೂ.500 ಲಕ್ಷಗಳವರೆಗೆ ಪರಿಗಣಿಸಿ, ಹೆಚ್ಚುವರಿ ಸಾಲದ ಮೊತ್ತಕ್ಕೆ ಕೆ.ಎಸ್.ಎಫ್.ಸಿಯ ಒಪ್ಪಂದಿತ ಬಡ್ಡಿದರ (contract rate of interest) ವಿಧಿಸಲಾಗುವುದು.
- ಘಟಕವು ಕೆ.ಎಸ್.ಎಫ್.ಸಿ ಯಿಂದ 'ಕಾಂಪೋಸಿಟ್ ಸಾಲ' ಪಡೆದಿದ್ದಲ್ಲಿ ಅದರಲ್ಲಿ 'ಅವಧಿ ಸಾಲ'ದ ಮೊತ್ತ ಅನ್ವಯವಾಗುವ ಕಟ್ಟಡ ಮತ್ತು ಉತ್ಪಾದನೆಗೆ ನೇರವಾಗಿ ಉಪಯೋಗಿಸುವ ಯಂತ್ರೋಪಕರಣ ಮೇಲೆ ಅನ್ವಯಿಸುತ್ತದೆ.
- ಸಹಾಯಧನದ ಬಿಡುಗಡೆ: ಬಡ್ಡಿ ಸಹಾಯಧನವನ್ನು ಮುಂಗಡವಾಗಿ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಗೆ ನೇರವಾಗಿ ಬಿಡುಗಡೆ ಮಾಡುವುದು. ಈ ಬಡ್ಡಿ ಸಹಾಯಧನವನ್ನು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯು ಅರ್ಹ ಘಟಕಗಳಿಗೆ ಆಯಾ ತಿಂಗಳು ಸರ್ಕಾರ ಬಿಡುಗಡೆ ಮಾಡಿದ ಅನುದಾನದಿಂದ ಭರಿಸುವುದು.

**ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರಿಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಹೊಸ ಹೂಡಿಕೆಗಾಗಿ ಸಾಲ ಪಡೆದು ಸ್ಥಾಪನೆಗೊಳ್ಳುವ ಸೂಕ್ಷ್ಮ ಮತ್ತು ಸಣ್ಣ ಉತ್ಪಾದನಾ ಕೈಗಾರಿಕೆಗಳಿಗೆ ಶೇ 4% ಬಡ್ಡಿ ಸಹಾಯಧನ ಯೋಜನೆಯಡಿಯಲ್ಲಿ ರೂ. 10.00 ಕೋಟಿವರೆಗೆ ಸಾಲವನ್ನು ವಿತರಿಸಲಾಗುತ್ತಿದೆ.**

4. **ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನೆ ಯೋಜನೆ (ಪಿಎಂಇಜಿಪಿ)**,

2008-09ನೇ ಸಾಲಿನಿಂದ ಪ್ರಧಾನ ಮಂತ್ರಿಗಳ ಉದ್ಯೋಗ ಸೃಷ್ಟಿ ಕಾರ್ಯಕ್ರಮವನ್ನು (PMEGP) ಜಾರಿಗೊಳಿಸಲಾಗುತ್ತಿದೆ. ಸ್ಥಳೀಯ ಸಂಪನ್ಮೂಲಗಳ ಆಧಾರದ ಮೇಲೆ ಉತ್ಪಾದನೆ ಮತ್ತು ಸೇವಾ ವಲಯಗಳ ಅಡಿಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ವಿದ್ಯಾವಂತ ನಿರುದ್ಯೋಗಿ ಯುವಕರಿಗೆ ಉದ್ಯೋಗವನ್ನು ಒದಗಿಸುವುದು ಯೋಜನೆಯ ಉದ್ದೇಶವಾಗಿದೆ.

ಈ ಯೋಜನೆಯಡಿ ವಿವಿಧ ಬ್ಯಾಂಕ್‌ಗಳ ಮೂಲಕ ಉತ್ಪಾದನಾ ವಲಯಕ್ಕೆ ರೂ. 50.00 ಲಕ್ಷ ಮತ್ತು ಸೇವಾ ವಲಯಕ್ಕೆ ರೂ. 20.00 ಲಕ್ಷದವರೆಗೆ ಸಾಲವನ್ನು ವಿಸ್ತರಿಸಲಾಗಿದೆ. ಯೋಜನೆಯಡಿಯಲ್ಲಿ ಲಭ್ಯವಿರುವ ಮಾರ್ಜಿನ್ ಹಣದ ವಿವರಗಳು ಕೆಳಕಂಡಂತಿವೆ:

| ವರ್ಗ | ಅಂಚುಹಣ | |
|---|---|---|
| | ನಗರ | ಗ್ರಾಮೀಣಾ |
| ಸಾಮಾನ್ಯ ವರ್ಗದವರಿಗೆ | 15% | 25% |
| ಪ.ಜಾ., ಪ.ಪಂ., ಹಿಂದುಳಿದ ವರ್ಗ, ಅಲ್ಪ ಸಂಖ್ಯಾತ ಮಾಜಿ ಸೈನಿಕ, ಅಂಗವಿಕಲ, ಮಹಿಳೆ | 25% | 35% |